# 2014-15 ನೇ ಸಾಲಿನ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಕಡಿಮೆ ವೆಚ್ಚದ ಈರುಳ್ಳಿ ಶೇಖರಣಾ ಘಟಕದ ಮಾರ್ಗಸೂಚಿ

## I. ಕಾರ್ಯಕ್ರಮ ಸಂಕ್ಷಿಪ್ತ ಪರಿಚಯ ಮತ್ತು ಮುಖ್ಯಾಂಶ:

ಬೆಳೆ ಕಟಾವಿನ ನಂತರ ಈರುಳ್ಳಿಯನ್ನು ಬಹು ದಿನಗಳ ಕಾಲ ಸುರಕ್ಷಿತವಾಗಿ ಶೇಖರಣೆ ಮಾಡಲು ಕಡಿಮೆ ವೆಚ್ಚದ ಈರುಳ್ಳಿ ಶೇಖರಣಾ ಘಟಕಗಳು ಅತ್ಯವಶ್ಯಕವಾಗಿರುತ್ತದೆ. ಇದಕ್ಕಾಗಿ ಕನಿಷ್ಟ 25 ಮೆಟ್ರಿಕ್ ಟನ್ ಶೇಖರಣಾ ಸಾಮರ್ಥ್ಯವಿರುವ ಘಟಕವು ಸೂಕ್ತವಾಗಿದೆ (ಬಿದಿರಿನಿಂದ ಅಥವಾ ಮರದ ರೀಪರ್ಸ್‌ನಿಂದ). ಪ್ರತಿ ಘಟಕಕ್ಕೆ ರೂ. 1.75 ಲಕ್ಷಗಳವರೆಗೆ ಯೋಜನಾ ಪ್ರಸ್ತಾವನೆ ವೆಚ್ಚವು ಇದ್ದು, ಇದರಲ್ಲಿ ಶೇ. 50% ರಂತೆ ಗರಿಷ್ಠ ರೂ. 0.875 ಲಕ್ಷದವರೆಗೆ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಸಹಾಯಧನ ನೀಡಲು ಅವಕಾಶವಿರುತ್ತದೆ. (on prorata basis of Storage Capacity in cub.mt).

## II. ಕಾರ್ಯಕ್ರಮದ ಉದ್ದೇಶ :

ಈರುಳ್ಳಿಯು ಹೆಚ್ಚು ತೇವಾಂಶಭರಿತ ಬೆಳೆಯಾಗಿದ್ದು, ಶ್ರೀಘ್ರವಾಗಿ ಹಾಳಾಗುವ ಗುಣ ಹೊಂದಿರುವ ಕಾರಣ, ಈರುಳ್ಳಿ ಬೆಳೆ ಕಟಾವಾದ ನಂತರ ಅನೇಕ ದಿನಗಳವರೆಗೂ ಹಾಳಾಗದಂತೆ ಸುಸ್ಥಿತಿಯಲ್ಲಿ ಶೇಖರಿಸಿ ಇಡಲು ಕಡಿಮೆ ವೆಚ್ಚದಲ್ಲಿ ಈರುಳ್ಳಿ ಶೇಖರಣಾ ಘಟಕವನ್ನು ನಿರ್ಮಿಸಲು ಸಹಾಯಧನದ ಸೌಲಭ್ಯವನ್ನು ಕಲ್ಪಿಸಿ ಈರುಳ್ಳಿ ಬೆಳೆಗಾರರಿಗೆ ಉತ್ತೇಜನವನ್ನು ನೀಡುವುದು.

## III. ಅನುದಾನ ಮತ್ತು ಸಹಾಯಧನ:

2014-15 ನೇ ಸಾಲಿನ ವಾರ್ಷಿಕ ಕ್ರಿಯಾ ಯೋಜನೆಯಲ್ಲಿ ಈರುಳ್ಳಿ ಶೇಖರಣಾ ಘಟಕ ಕಾರ್ಯಕ್ರಮದಡಿ ಭೌತಿಕ- 100 ಸಂಖ್ಯೆ ಹಾಗೂ ಆರ್ಥಿಕ 87.50 ಲಕ್ಷಗಳಿಗೆ ಅನುಮೋದನೆಯಾಗಿರುತ್ತದೆ.

## IV. ತಾಂತ್ರಿಕ ವೈಶಿಷ್ಟತೆಗಳು:

1. ಈರುಳ್ಳಿ ಶೇಖರಣಾ ಘಟಕವು 12 ಮೀಟರ್ ಉದ್ದ x 3.60 ಮೀ ಅಗಲ x 1.80 ಮೀ (ಬದಿಯ ಎತ್ತರ) x 2.10 ಮೀ (ಮದ್ಯದ ಎತ್ತರ) ಇದ್ದು, 90 ಘ.ಮೀ ಒಳಾಂಗಣ ಸಾಮರ್ಥ್ಯವನ್ನು ಹೊಂದಿರಬೇಕು.
2. ಈರುಳ್ಳಿ ಶೇಖರಣೆ ಘಟಕವು ಕನಿಷ್ಠ 25 ಮೆಟ್ರಿಕ್ ಟನ್ ಶೇಖರಣಾ ಸಾಮರ್ಥ್ಯವನ್ನು ಹೊಂದಿರಬೇಕು.
3. ನಿಗಧಿಪಡಿಸಿರುವ ಮಾದರಿ ನಕ್ಷೆಯಂತೆ ಈರುಳ್ಳಿ ಶೇಖರಣಾ ಘಟಕ ನಿರ್ಮಾಣ ಮಾಡುವುದು ಕಡ್ಡಾಯವಾಗಿ ಇರುತ್ತದೆ ಅಥವಾ ಈಗಾಗಲೇ ದಾವಣಗೆರೆ ಹಾಗೂ ಚಿತ್ರದುರ್ಗ ಜಿಲ್ಲೆಯವರು ಸ್ಥಳೀಯ ಮಾದರಿಯ ಈರುಳ್ಳಿ ಶೇಖರಣಾ ಘಟಕಗಳನ್ನು ನಿರ್ಮಿಸಲು ನಿರ್ದೇಶನಾಲಯದಿಂದ ಅನುಮತಿ ಪಡೆದಿರುವ ನಕ್ಷೆಗಳಂತೆಯೂ ಸಹ ಘಟಕ ನಿರ್ಮಿಸಬಹುದು (ನಕ್ಷೆ ಅನುಬಂಧಿಸಿದೆ).

4. ಗೋದಾಮಿನ ತಳ (base / floor) ವನ್ನು ನೆಲಮಟ್ಟದಿಂದ ಕನಿಷ್ಟ 2ft ಎತ್ತರಿಸಿದ ರೀತಿಯಲ್ಲಿದ್ದು, ಕೆಳಗಿನಿಂದ ಮತ್ತು ಎಲ್ಲಾ ಬದಿಗಳಿಂದಲೂ ಸರಾಗವಾಗಿ ಗಾಳಿಯು ಸುಳಿದಾಡುವಂತಿರಬೇಕು ಹಾಗೂ ಘಟಕದ ಮೇಲ್ಛಾವಣಿಯು ಹಂಚು / asbestos / Tin sheet ಅಥವಾ ಸ್ಥಳೀಯವಾಗಿ ದೊರೆಯುವ ಕೃಷಿ ಹಾಗೂ ಅರಣ್ಯದ ವಸ್ತುಗಳನ್ನು ಉಪಯೋಗಿಸಿ ರಚಿಸಬಹುದು. (ಮಳೆಯ ನೀರು ಘಟಕದ ಒಳಗೆ ಹೋಗದಂತೆ ಮೇಲ್ಚಾವಣಿಯು ನಿರ್ಮಾಣವಾಗಿರಬೇಕು).
5. ಈರುಳ್ಳಿ ದಾಸ್ತಾನು ಮಳಿಗೆ / ದಾಸ್ತಾನು ಮಾಡುವ ಸ್ಥಳದ ಸುರಕ್ಷಿತ ದೃಷ್ಟಿಯಿಂದ ರೈತರಿಗೆ ಅನುಕೂಲವಾಗುವ ತಮ್ಮ ಸ್ವಂತ ಜಾಗದಲ್ಲಿ ನಿರ್ಮಿಸಬೇಕು. ಉದ್ದೇಶಿತ ಸ್ಥಳದ ಪಹಣಿ ಅಥವಾ ಭೂ ದಾಖಲೆಗಳು ರೈತನ ಹೆಸರಿನಲ್ಲಿರುವುದು ಕಡ್ಡಾಯವಾಗಿರುತ್ತದೆ.

**ಈರುಳ್ಳಿ ಶೇಖರಣಾ ಘಟಕ ನಿರ್ಮಾಣ ಮಾಡಲು ತಗಲುವ ಅಂದಾಜು ವೆಚ್ಚ :**

| Sl.No | Total QTY | Description | Rate | Unit | Amount (Rs) |
|---|---|---|---|---|---|
| 1 | 3.888 | Excavation for foundation | 87 | LS | 340.00 |
| 2 | 0.729 | P.C.C 1:4:8 in foundation | 1970 | Cu.m | 1436.00 |
| 3 | 2.339 | R.C.C 1:2:4 for columns | 3482 | Cu.m | 8144.00 |
| 4 | 320 | Nominal Reinforcement to columns | 53 | Kg. | 16800.00 |
| 5 | 1200 | Structural Works | 70 | Kg. | 84000.00 |
| 6 | 83.2 | A/C Sheet Roofing | 350 | Sq.m. | 29120.00 |
| 7 | 13 | A/C Sheet Ridge | 210 | Rmt. | 2730.00 |
| 8 | 1454.4 | 2” Dial 1/2 Bamboo or Wooden Strips @3” C/C | 17 | Rmt. | 25430.00 |
| 9 | | Other Miscellaneous | | | 7000.00 |
| **Total** | | | | | **1,75000.00** |

**V. ಫಲಾನುಭವಿಗಳ ಅರ್ಹತೆ:**

1) ಫಲಾನುಭವಿಗಳು ರೈತರಾಗಿದ್ದು ಜಮೀನು ಅವರ ಹೆಸರಿನಲ್ಲಿರಬೇಕು. ಜಂಟಿ ಖಾತೆಯಾಗಿದ್ದಲ್ಲಿ ಇತರೆ ಖಾತೆದಾರರ ಒಪ್ಪಿಗೆ ಪತ್ರವನ್ನು ಪಡೆದಿರಬೇಕು. ತಂದೆ ಅಥವಾ ತಾಯಿಯ ಹೆಸರಿನಲ್ಲಿ ಜಮೀನಿದ್ದು, ಅವರು ಮರಣ ಹೊಂದಿದ್ದಲ್ಲಿ ಮಾತ್ರ ಗ್ರಾಮ ಲೆಕ್ಕಿಗರಿಂದ ದೃಡೀಕರಿಸಿ,ಕುಟುಂಬದ ಇತರೆ ಸದಸ್ಯರಿಂದ ಒಪ್ಪಿಗೆ ಪಡೆದು ತಮ್ಮ ಹೆಸರಿನಲ್ಲಿ ಅರ್ಜಿಯನ್ನು ಸಲ್ಲಿಸುವುದು.
2) ಮಹಿಳೆಯ ಹೆಸರಿನಲ್ಲಿ ಖಾತೆ ಹೊಂದಿದ್ದು, ಕುಟುಂಬದ ಇತರೆ ಪುರುಷ ಸದಸ್ಯರ ಹೆಸರಲ್ಲಿ ಅರ್ಜಿ ಸಲ್ಲಿಸಿದ್ದಲ್ಲಿ ಯಾವುದೇ ಕಾರಣಕ್ಕೂ ಮಾನ್ಯ ಮಾಡಬಾರದು. ಮಹಿಳೆಯರ ಹೆಸರಿನಲ್ಲಿಯೇ ಅರ್ಜಿ ಸಲ್ಲಿಸುವುದನ್ನು ಉತ್ತೇಜಿಸಬೇಕು.

3) ಫಲಾನುಭವಿಗಳು ತೋಟಗಾರಿಕೆ ಬೆಳೆಗಳನ್ನು ಬೆಳೆಯುವ ರೈತರಾಗಿರಬೇಕು ಅಥವಾ ತೋಟಗಾರಿಕೆ ಬೆಳೆ ಬೆಳೆಯುವ ಆಸಕ್ತಿಯನ್ನು ಹೊಂದಿರಬೇಕು.

4) ಈರುಳ್ಳಿ ಶೇಖರಣಾ ಘಟಕಕ್ಕೆ ಸಹಾಯಧನ ಪಡೆಯಲು ಉದ್ದೇಶಿಸುವ ಫಲಾನುಭವಿಯು ಕನಿಷ್ಠ 1.00 ಹೆ. ಪ್ರದೇಶದಲ್ಲಿ ಈರುಳ್ಳಿ ಬೆಳೆಯನ್ನು ಬೆಳೆಯುತ್ತಿರಬೇಕು / ಬೆಳೆಯಬೇಕು.

5) ಈರುಳ್ಳಿ ಶೇಖರಣಾ ಘಟಕಕ್ಕೆ ಕೇಂದ್ರ / ರಾಜ್ಯ ಸರ್ಕಾರದ ಇತರೆ ಯಾವುದೇ ಕಾರ್ಯಕ್ರಮದಡಿ ಸಹಾಯಧನ ಪಡೆದುಕೊಂಡಿರುವುದಿಲ್ಲ ಎಂಬ ಧೃಡೀಕರಣ ಪತ್ರ ಪಡೆದುಕೊಳ್ಳುವುದು.

VI. <u>ಅರ್ಜಿಸಲ್ಲಿಸುವ ವಿಧಾನ, ಅರ್ಜಿ ಪರಿಶೀಲನೆ ಮತ್ತು ಫಲಾನುಭವಿಗಳ ಆಯ್ಕೆ:-</u>

1) ಜಿಲ್ಲೆಯ ತೋಟಗಾರಿಕೆ ಉಪ ನಿರ್ದೇಶಕರು (ಜಿಪಂ) ರವರು ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯ ಮಾರ್ಗಸೂಚಿ ಪ್ರಕಾರ ಅರ್ಹ ರೈತರಿಂದ ಅರ್ಜಿಗಳನ್ನು ಆಹ್ವಾನಿಸಲು ಜಿಲ್ಲೆಗೆ ನಿಗದಿ ಪಡಿಸಿರುವ ಗುರಿಯ ಮಿತಿಯಲ್ಲಿ ಪ್ರಕಟಣೆಯನ್ನು ಸ್ಥಳಿಯ ಪತ್ರಿಕೆಗಳ ಮುಖಾಂತರವಾಗಿ ಹಾಗೂ ಜಿಲ್ಲೆಯ ತಾಲ್ಲೂಕಿನ ಕಛೇರಿಯ ಸೂಚನಾ ಫಲಕದಲ್ಲಿ ಪ್ರದರ್ಶಿಸುವ ಮೂಲಕ ಹೆಚ್ಚಿನ ಪ್ರಚಾರ ನೀಡಿ ಅರ್ಹ ಫಲಾನುಭವಿಗಳಿಂದ ಅರ್ಜಿಗಳನ್ನು ಅಹ್ವಾನಿಸುವುದು.

2) ಅಧಿಸೂಚನೆಯಲ್ಲಿ ಕಡ್ಡಾಯವಾಗಿ ಫಲಾನುಭವಿಗಳ ಅರ್ಹತೆ, ಆಯ್ಕೆಯ ಮಾನದಂಡಗಳು, ಸಲ್ಲಿಸಬೇಕಾದ ದಾಖಲಾತಿಗಳು, ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ, ಜಿಲ್ಲೆಗೆ ನಿಗದಿಪಡಿಸಿದ ಗುರಿ ಮತ್ತು ನಿಗದಿಪಡಿಸಿದ ಗುರಿಗಿಂತ ಹೆಚ್ಚಿನ ಅರ್ಜಿಗಳು ಸ್ವೀಕರಿಸಿದಲ್ಲಿ ಅನುಸರಿಸುವ ವಿಧಾನದ ಬಗ್ಗೆ ಸ್ಪಷ್ಟವಾದ ಮಾಹಿತಿ ಇರತಕ್ಕದ್ದು.

3) ಆಸಕ್ತಿಯುಳ್ಳ ರೈತರು ಅರ್ಜಿಯನ್ನು ಮೊದಲಿಗೆ ಈ ಕೆಳಕಂಡ ದಾಖಲಾತಿಗಳೊಂದಿಗೆ ತಾಲ್ಲೂಕು ಹಿಸತೋನಿ/ಸತೋನಿ ಕಛೇರಿಗೆ ಸಲ್ಲಿಸುವುದು.

   a. ನಿಗಧಿತ ನಮೂನೆಯಲ್ಲಿ ಫಲಾನುಭವಿಯ ಭಾವಚಿತ್ರ ಹಾಗೂ ಫಲಾನುಭವಿಯ ವಿವರಗಳನ್ನು ಭರ್ತಿ ಮಾಡಿ ಸಹಿ ಮಾಡಿದ ಅರ್ಜಿ (ದ್ವಿ ಪ್ರತಿಯಲ್ಲಿ) .
   b. ಪಹಣಿ (RTC) (ಬೆಳೆ ಮತ್ತು ವಿಸ್ತೀರ್ಣ ನಮೂದಿಸಿರಬೇಕು) ಜನವರಿ 2014 ರ ಮಾಹೆಯ ನಂತರದ್ದಾಗಿರಬೇಕು.
   c. ತಾಲ್ಲೂಕು ಮಟ್ಟದ ಅಧಿಕಾರಿಗಳು ಅರ್ಜಿಯನ್ನು ಪರಿಶೀಲಿಸಿದ ನಂತರ ಫಲಾನುಭವಿಗಳ ಜೇಷ್ಠತಾ ಪಟ್ಟಿಯನ್ನು ತಯಾರಿಸಿ, ತಮ್ಮ ಶಿಫಾರಸ್ಸಿನೊಂದಿಗೆ ತೋಟಗಾರಿಕೆ ಉಪ ನಿರ್ದೇಶಕರ ಕಛೇರಿಗೆ ಸಲ್ಲಿಸಬೇಕು.
   d. ಜಿಲ್ಲೆಗೆ ನಿಗಧಿಪಡಿಸಿರುವ ಭೌತಿಕ ಮತ್ತು ಆರ್ಥಿಕ ಗುರಿಗಳನ್ನು ಪಾಲಿಸಿಕೊಂಡು ಜಿಲ್ಲಾ ಸಮಿತಿಯ ಗಮನಕ್ಕೆ ತಂದು ಜಿಲ್ಲಾ ಸಮಿತಿಯ ಮುಖಾಂತರ ಜೇಷ್ಠತಾ ಪಟ್ಟಿಯನ್ನು ಆಧರಿಸಿ ಫಲಾನುಭವಿಯನ್ನು ಆಯ್ಕೆ ಮಾಡಬೇಕು.

4) ತಾಲ್ಲೂಕು ಹಿಸತೋನಿ / ಸತೋನಿರವರು ಅರ್ಜಿ ಹಾಗೂ ಮೇಲ್ಕಂಡ ಈರುಳ್ಳಿ ಶೇಖರಣಾ ಘಟಕ ದಾಖಲಾತಿಗಳನ್ನು ಪರಿಶೀಲಿಸಿ, ಅರ್ಹ ಅರ್ಜಿದಾರರ ಹೆಸರುಗಳನ್ನು ಜೇಷ್ಠತಾ ವಹಿಯಲ್ಲಿ ನಮೂದಿಸಿ 5 ದಿನಗಳ ಒಳಗಾಗಿ ಸಹಾಯಧನದ ಅರ್ಜಿಯನ್ನು ತೋಉನಿ(ಜಿಪಂ) ರವರಿಗೆ ಎಲ್ಲಾ ದಾಖಲಾತಿಗಳ ಸಹಿತ

ಕಳುಹಿಸುವುದು.ತೋಟಗಾರಿಕೆ ಉಪ- ನಿರ್ದೇಶಕರು (ಜಿಪಂ) ರವರು ಜಿಲ್ಲೆಯ ಎಲ್ಲಾ ಹಿಸತೋನಿ/ಸತೋನಿ ರವರಿಂದ ಬಂದ ಅರ್ಜಿಗಳನ್ನು ಪರಿಶೀಲಿಸಿ ತಾಲ್ಲೂಕುವಾರು ಜೇಷ್ಠತಾ ಪಟ್ಟಿಯನ್ನು ಅನುಮೋದಿಸುವುದು.

5) ಜಿಲ್ಲೆಯ ತೋಉನಿ (ಜಿಪಂ) ರವರು ಅರ್ಜಿಯನ್ನು ಹಾಗೂ ದಾಖಲಾತಿಗಳನ್ನು ಪರಿಶೀಲಿಸಿದ ನಂತರ ಅನುಮೋದಿತ ವಾರ್ಷಿಕ ಕ್ರಿಯಾ ಯೋಜನೆಯ ಮಿತಿಯಲ್ಲಿ ಫಲಾನುಭವಿಗೆ work Order / letter of intent ನ್ನು 5 ದಿನಗಳೊಳಗಾಗಿ ನೀಡುವುದು.

6) ತೋಉನಿ (ಜಿಪಂ) ರವರಿಂದ work order/letter of intent ಪಡೆದ ನಂತರ ರೈತರು ಸದರಿ ಯೋಜನೆಯ ಅನುಸಾರ 15 ದಿನಗಳೊಳಗಾಗಿ ಕಾಮಗಾರಿಯನ್ನು ಪ್ರಾರಂಭಿಸಿ 60 ದಿನಗಳೊಳಗಾಗಿ ಮುಗಿಸಬೇಕು.

7) ತೋಉನಿ (ಜಿಪಂ) ರವರಿಂದ Work order ನೀಡಲಾದ ನಂತರ ಸಂಬಂಧಿಸಿದ ಸಹಾಯಕ ತೋಟಗಾರಿಕೆ ಅಧಿಕಾರಿ (RSK) ರವರು ಫಲಾನುಭವಿಯೊಂದಿಗೆ ತಾಕುಗಳನ್ನು ಪರಿಶೀಲಿಸಿ ಯೋಜನೆಯ ಅನುಷ್ಠಾನದ ಗುಣಮಟ್ಟ ಹಾಗೂ ಈರುಳ್ಳಿ ಶೇಖರಣಾ ಘಟಕ ಅಳವಡಿಸಿರುವ ಪ್ರಮಾಣ ಕುರಿತಂತೆ ತೃಪ್ತಿಕರವಾಗಿದ್ದಲ್ಲಿ, ಅನುಷ್ಠಾನದ ವಿವರ ಹಾಗೂ ಫಲಾನುಭವಿಗಳ ಸಮೇತ ಛಾಯಚಿತ್ರಗಳು ಹಾಗೂ ವರದಿಯನ್ನು ಸತೋಅ (RSK) ಹಾಗೂ ಹಿಸತೋನಿ ರವರ ದೃಢೀಕರಣದೊಂದಿಗೆ ತೋಟಗಾರಿಕೆ ಉಪ ನಿರ್ದೇಶಕರು (ಜಿಪಂ) ರವರಿಗೆ ಸಲ್ಲಿಸುವುದು .

8) ರೈತರು ಸಲ್ಲಿಸುವ ಪ್ರತಿಯೊಂದು ಸಹಾಯಧನದ ಅರ್ಜಿ ಮತ್ತು ದಾಖಲಾತಿಗಳನ್ನು ಪರಿಶೀಲಿಸುವುದು.

9) ಪ್ರಸ್ತಾವನೆಯೊಂದಿಗೆ ಉದ್ದೇಶಿತ ಘಟಕದ ನಕ್ಷೆ ಹಾಗೂ ಅಂದಾಜು ಪಟ್ಟಿಯನ್ನು ನೋಂದಾಯಿತ ಇಂಜಿನಿಯರ್ ಅಥವಾ Architect ಅಥವಾ ಸರ್ಕರದ ಯಾವುದೇ ಇಲಾಖೆಯ ಇಂಜಿನಿಯರ್ ರವರಿಂದ/ನಿವೃತ್ತ ಇಂಜಿನಿಯರ್‌ರವರಿಂದ ಧೃಡೀಕರಿಸಿದ ಪ್ರತಿಯೊಂದಿಗೆ ಸಲ್ಲಿಸುವುದು. (Plan & Estimate).

10) ಪ್ರತಿ ಅರ್ಜಿಯನ್ನು ಸಹಾಯಕ ತೋಟಗಾರಿಕೆ ಅಧಿಕಾರಿ (RSK) ರವರು ಕಡ್ಡಾಯವಾಗಿ (ಶೇ.100 ರಷ್ಟು) ತಾಕುಗಳನ್ನು ಪರಿಶೀಲನೆ ನಡೆಸಬೇಕು. ಸತೋಅ (RSK) ರವರು ಪರಿಶೀಲಿಸಿದ ಘಟಕಗಳ ಪೈಕಿ ಕನಿಷ್ಟ ಶೇ.50 ರಷ್ಟು ತಾಕುಗಳನ್ನು ತಾಲ್ಲೂಕು ಸತೋನಿ/ಹಿಸತೋನಿ ರವರು ಪರಿಶೀಲಿಸಬೇಕು. ಸತೋಅ (RSK) ರವರು ನಡೆಸಿರುವ ಪರಿಶೀಲನೆಯಲ್ಲಿ ಯಾವುದಾದರು ನ್ಯೂನ್ಯತೆಗಳಿದ್ದರೆ ಅರ್ಜಿಯನ್ನು ತಿರಸ್ಕರಿಸುವುದಲ್ಲದೇ ಅವರನ್ನೇ ನೇರ ಜವಾಬ್ದಾರರನ್ನಾಗಿ ಮಾಡುವುದು. ಜಿಲ್ಲೆಯ ತೋಉನಿ (ಜಿಪಂ) ರವರು ಶೇ.5 ರಷ್ಟು ಘಟಕಗಳನ್ನು ಪರಿಶೀಲನೆ ಕಡ್ಡಾಯವಾಗಿ ಮಾಡುವುದು. ಸತೋನಿ/ಹಿಸತೋನಿ ರವರು ಪರಿಶೀಲಿಸಿರುವ ಅರ್ಜಿಗಳಲ್ಲಿ ಯಾವುದಾದರು ನ್ಯೂನ್ಯತೆಗಳಿದ್ದರೆ ಸತೋನಿ/ಹಿಸತೋನಿ ರವರನ್ನು ಜವಾಬ್ದಾರರನ್ನಾಗಿ ಮಾಡಿ ನಿರ್ದೇಶನಾಲಯಕ್ಕೆ ವರದಿಯನ್ನು ಸಲ್ಲಿಸುವುದು. ಮೇಲಿನ ಎಲ್ಲಾ ಅಧಿಕಾರಿಗಳು ತಮ್ಮ ಸ್ಥಳ ಪರಿಶೀಲನೆ ಸಮಯದಲ್ಲಿ ಕಡ್ಡಾಯವಾಗಿ ಛಾಯಚಿತ್ರಗಳನ್ನು ದಾಖಲಿಸುವುದು.

11) ರೈತರು ಬೆಳೆಯುವ ಬೆಳೆಯನ್ನು ಪಹಣಿಯಲ್ಲಿ ನಮೂದಿಸದೆ ಇರುವ ಪಕ್ಷದಲ್ಲಿ ಸಹಾಯಕ ತೋಟಗಾರಿಕೆ ಅಧಿಕಾರಿ (RSK) ಯಿಂದ ಬೆಳೆಯನ್ನು ಧೃಢೀಕರಿಸಿದ ಅರ್ಜಿಗಳನ್ನು ಪರಿಗಣಿಸುವುದು.

12) ಪ್ರಸ್ತಾವನೆಯೊಂದಿಗೆ ಸಲ್ಲಿಸುವ ಎಲ್ಲಾ ದಾಖಲಾತಿ ಪತ್ರಗಳಿಗೆ ಆಯಾ ರೈತ ಸಂಪರ್ಕ ಕೇಂದ್ರದ ಸ.ತೋ.ಅ ಮತ್ತು ತಾಲ್ಲೂಕಿನ ಹಿ.ಸ.ತೋ.ನಿ./ಸ.ತೋ.ನಿ.ರವರು ಕಡ್ಡಾಯವಾಗಿ ದಿನಾಂಕ ಮತ್ತು ಸಹಿಯೊಂದಿಗೆ ದೃಢೀಕರಣ ಮಾಡಬೇಕು.

## VII. ತಾಂತ್ರಿಕ ಪರಿಶೀಲನಾ ಕ್ರಮಗಳು :-

ತಾಕು ಪರಿಶೀಲನೆ ಸಮಯದಲ್ಲಿ ಅನುಷ್ಠಾನಾಧಿಕಾರಿಗಳು ಈ ಕೆಳಕಂಡ ಅಂಶಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

- ಪ್ರಸ್ತಾವನೆಯೊಂದಿಗೆ ಅಡಿಪಾಯ ಹಾಕಿದ ಸಮಯದಲ್ಲಿ ಹಾಗೂ ಮೇಲ್ಛಾವಣಿ ಹಂತಕ್ಕೆ ಬಂದ ಸಮಯದಲ್ಲಿ 4 ದಿಕ್ಕುಗಳಿಂದ ಸಂಪೂರ್ಣ ಕಟ್ಟಡ ಕಾಣುವಂತೆ ಫಲಾನುಭವಿಯೊಂದಿಗೆ ಸಂಬಂಧಿಸಿದ ರೈತ ಸಂಪರ್ಕ ಕೇಂದ್ರದ ಅಧಿಕಾರಿ / ತಾಲ್ಲೂಕು ಮಟ್ಟದ ಅಧಿಕಾರಿಗಳೊಂದಿಗೆ ತೆಗೆದಿರುವ ಛಾಯಾಚಿತ್ರಗಳನ್ನು ಕಡ್ಡಾಯವಾಗಿ ಅರ್ಜಿಯೊಂದಿಗೆ ಲಗತ್ತಿಸಬೇಕು.
- ರೈತರು ಪ್ಯಾಕ್‌ಹೌಸ್ ಘಟಕವನ್ನು ಮಾರ್ಗಸೂಚಿ ಮತ್ತು ಅಂದಾಜು ಪಟ್ಟಿಯಂತೆ ನಿರ್ಮಿಸಿರುವ ಬಗ್ಗೆ ಪರಿಶೀಲಿಸಬೇಕು.

## VIII. ಸಹಾಯಧನ ವಿತರಣೆ:

1. ಜಿಲ್ಲೆಯ ತೋಉನಿ(ಜಿಪಂ) ರವರು ಎಲ್ಲಾ ದಾಖಲೆಗಳನ್ನು ಹಾಗೂ ಹಿಸತೋನಿ ನೀಡಿರುವ ಈರುಳ್ಳಿ ಶೇಖರಣಾ ಘಟಕ ಅನುಷ್ಠಾನದ ವರದಿಯನ್ನು ಪರಿಶೀಲಿಸಿದ ನಂತರ ಕೆಲಸವು ತೃಪ್ತಿಕರವಾಗಿದಲ್ಲಿ ಮಾತ್ರ ಸಹಾಯಧನದ ಮೊತ್ತವನ್ನು ಈ ಕೆಳಕಂಡ ಯಾವುದಾದರು ಒಂದು ವಿಧಾನದಲ್ಲಿ ಬಿಡುಗಡೆ ಮಾಡುವುದು.
2. ಫಲಾನುಭವಿಯು ಬ್ಯಾಂಕಿನಿಂದ ಸಾಲ ಪಡೆದಿದ್ದಲ್ಲಿ ಬ್ಯಾಂಕ್ ಸಾಲದ ಖಾತೆಗೆ ಜಮಾ ಅಗುವಂತೆ ಅಥವಾ ಫಲಾನುಭವಿಯ ಉಳಿತಾಯ ಖಾತೆಗೆ ಮಾರ್ಗಸೂಚಿಗಳನ್ನು ಪಾಲಿಸಿ ECS/NEFT ಮುಖಾಂತರ ಸಹಾಯಧನವನ್ನು ಜಮಾ ಮಾಡುವುದು.
3. ECS/NEFT ಸೌಲಭ್ಯ ಇಲ್ಲದಿದ್ದಲ್ಲಿ ಅಂತಹ ಬ್ಯಾಂಕ್‌ನ ಮ್ಯಾನೇಜರ್ ಹೆಸರಿಗೆ ಚೆಕ್‌ನ್ನು ನೀಡಿ ಫಲಾನುಭವಿಯ ಬ್ಯಾಂಕ್ ಖಾತೆಗೆ ಜಮಾ ಮಾಡುವುದು.
4. ಈರುಳ್ಳಿ ಶೇಖರಣಾ ಗೋದಾಮು ಕಾಮಗಾರಿಯು ಪೂರ್ಣಗೊಂಡಿರುವ ಬಗ್ಗೆ ಸಂಬಂಧಿಸಿದ ರೈತ ಸಂಪರ್ಕ ಕೇಂದ್ರದ ಅಧಿಕಾರಿ ಹಾಗೂ ತಾಲ್ಲೂಕು ಅಧಿಕಾರಿಯವರು ಜಂಟಿಯಾಗಿ ಸ್ಥಳ ಪರಿಶೀಲನೆ ಮಾಡಿ ಖಚಿತಪಡಿಸಿಕೊಳ್ಳುವುದು ಹಾಗೂ ಪೂರ್ಣಗೊಂಡಿರುವ ಘಟಕದ ಛಾಯಚಿತ್ರಗಳನ್ನು ಪಡೆದುಕೊಂಡ ನಂತರವೇ ಅಂತಿಮ ಸಹಾಯಧನ ಬಿಡುಗಡೆ ಮಾಡುವುದು ಕಡ್ಡಾಯವಾಗಿರುತ್ತದೆ .
5. ಫಲಾನುಭವಿಯು ಸಹಾಯಧನ ಪಡೆದಿರುವ ಬಗ್ಗೆ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಲೋಗೋ (LOGO) ದೊಂದಿಗೆ ಸಂಕ್ಷಿಪ್ತ ವಿವರಗಳುಳ್ಳ **ನಾಮಫಲಕವನ್ನು** ಕಡ್ಡಾಯವಾಗಿ ಈರುಳ್ಳಿ ಶೇಖರಣಾ ಘಟಕದ ಮುಂಭಾಗದಲ್ಲಿ ಪ್ರದರ್ಶಿಸಬೇಕು.

## XIV.ಆರ್ಥಿಕ ಪ್ರತ್ಯಾಯೋಜನೆ ( Delegation of Power) :

- ಈ ಯೋಜನೆಯಡಿ ಮಂಜೂರಾತಿ ನೀಡುವ ಮತ್ತು ಸಹಾಯಧನ ಬಿಡುಗಡೆ ಮಾಡುವ ಅಧಿಕಾರವು ಆಯಾ ಜಿಲ್ಲೆಯ ತೋ.ಉ.ನಿ. ರವರಿಗೆ ನೀಡಲಾಗಿರುತ್ತದೆ.

## XV. Reporting and documentation (ವರದಿ ಮಾಡುವುದು ಮತ್ತು ದಾಖಲೆಗಳನ್ನು ನಿರ್ವಹಿಸುವುದು).

- ಆಯಾ ಮಾಹೆಯ ಅಂತಿಮ ಪ್ರಗತಿ ವರದಿ, ಯಶೋಗಾಥೆಗಳು ಮತ್ತು ಯೋಜನೆಯ ಅನುಷ್ಠಾನದಿಂದ ಆಗುವ ಪ್ರಯೋಜನಗಳನ್ನು (ಲಿಖಿತ, ದೃಶ್ಯ ಮತ್ತು ಶ್ರವಣ) ಸಾಫ್ಟ್ ಕಾಪಿ ಮತ್ತು ಹಾರ್ಡ್ ಕಾಪಿಯೊಂದಿಗೆ KSHMA ಕಛೇರಿಗೆ ಮತ್ತು ತೋಟಗಾರಿಕೆ ಉಪ ನಿರ್ದೇಶಕರು (ತೋಟಗಾರಿಕೆ ಮಾಹಿತಿ ಕೇಂದ್ರ) ರವರಿಗೆ ಪ್ರತಿ ಮಾಹೆಯ ದಿನಾಂಕ: 02 ರೊಳಗಾಗಿ ತಪ್ಪದೆ ವರದಿಯನ್ನು ಕಳುಹಿಸುವುದು.

- ಮುಂದಿನ ಆದೇಶ ನೀಡುವವರೆಗೂ ಈ ಮಾರ್ಗಸೂಚಿ ಚಾಲ್ತಿಯಲ್ಲಿರುತ್ತದೆ.

## ದಾವಣಗೆರೆ ಜಿಲ್ಲೆಯ ಸ್ಥಳೀಯ ಮಾದರಿಯ ಈರುಳ್ಳಿ ಶೇಖರಣಾ ಘಟಕ




## ಚಿತ್ರದುರ್ಗ ಜಿಲ್ಲೆಯ ಸ್ಥಳೀಯ ಮಾದರಿಯ ಈರುಳ್ಳಿ ಶೇಖರಣಾ ಘಟಕ

